# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 495 |
| ಮಾನ್ಯ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ), |
| ಉತ್ತರಿಸುವ ಸಚಿವರು | ಮಾನ್ಯ ಉನ್ನತ ಶಿಕ್ಷಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | 13-12-2018. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಳಗಾವಿಯಲ್ಲಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಅಧೀನದಲ್ಲಿ ಅಭ್ಯಸಿಸಿರುವ ವಿದ್ಯಾರ್ಥಿಗಳು ನಿಗದಿತ ಸಮಯದಲ್ಲಿ ಪದವಿ ಪೂರ್ಣಗೊಳಿಸಲಾಗದೇ ಅವಕಾಶ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ | ಹಾಗಿದ್ದಲ್ಲಿ, ಎಷ್ಟು ವಿದ್ಯಾರ್ಥಿಗಳು ಅವಕಾಶ ವಂಚಿತರಾಗುತ್ತಿದ್ದಾರೆ: | ರಾಣಿಚನ್ನಮ್ಮ ವಿಶ್ವವಿದ್ಯಾಲಯದ ಪರೀಕ್ಷಾ ವಿಭಾಗಕ್ಕೆ ಇದುವರೆವಿಗೂ 32 ವಿದ್ಯಾರ್ಥಿಗಳು ಖುದ್ದಾಗಿ ಸಂಪರ್ಕಿಸಿರುತ್ತಾರೆ. ಉಳಿದಂತೆ ಹಲವಾರು ವಿದ್ಯಾರ್ಥಿಗಳು ದೂರವಾಣಿ ಮೂಲಕ ಈ ಕುರಿತು ಮಾಹಿತಿಯನ್ನು ಪಡೆದಿರುತ್ತಾರೆ. |
| ಇ | ಅಂತಹ ವಿದ್ಯಾರ್ಥಿಗಳಿಗೆ ಕೊನೆಯ ಸುವರ್ಣಾವಕಾಶ (ಗೋಲ್ಡನ್ ಚಾನ್ಸ್) ವನ್ನು ಕಲ್ಪಿಸಿಕೊಡಲು ಕಾನೂನಿನಲ್ಲಿ ಅವಕಾಶವಿದೆಯೇ: | ಈ ಸಂಬಂಧ ರಾಣಿಚನ್ನಮ್ಮ ವಿಶ್ವವಿದ್ಯಾಲಯವು ಕರಡು ವಿನಿಯಮಗಳನ್ನು ಸರ್ಕಾರದ ಅನುಮೋದನೆಗೆ ಸಲ್ಲಿಸಿದ್ದು, ಸದರಿ ವಿನಿಯಮಗಳನ್ನು ನಿಯಮಾನುಸಾರ ಪರಿಶೀಲಿಸಿ ಪರಿಷ್ಕೃತ ವಿನಿಯಮಗಳನ್ನು ಸಲ್ಲಿಸುವಂತೆ ರಾಣಿಚನ್ನಮ್ಮ ವಿಶ್ವವಿದ್ಯಾಲಯಕ್ಕೆ ತಿಳಿಸಲಾಗಿರುತ್ತದೆ. ಈ ಸಂಬಂಧ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾದ ಕೂಡಲೇ ಯು.ಜಿ.ಸಿ ಮಾರ್ಗಸೂಚಿಗಳು ಹಾಗೂ ನಿಯಮಗಳನ್ವಯ ಪರಿಶೀಲಿಸಿ ಕ್ರಮವಹಿಸಲಾಗುವುದು. |
| ಈ | ಹಾಗಿದ್ದಲ್ಲಿ, ಸದರಿ ವಿದ್ಯಾರ್ಥಿಗಳಿಗೆ ಕೊನೆಯ ಸುವರ್ಣಾವಕಾಶ (ಗೋಲ್ಡನ್ ಚಾನ್ಸ್) ವನ್ನು ಕಲ್ಪಿಸಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | |

**ಸಂಖ್ಯೆ: ಇಡಿ 412 ಯುಆರ್‌ಸಿ 2018**

(ಜಿ.ಟಿ.ದೇವೇಗೌಡ)

ಉನ್ನತ ಶಿಕ್ಷಣ ಸಚಿವರು